[ Govt. of Karnataka C.R.P. 67]

| Deposition Sheets (RP.No.57) Form No.4 |
|---|

**IN THE COURT OF Addl. CIVIL JUDGE & J.M.F.C., KARKALA.**

**Criminal Case No. 1567/2023**

ಪಿ.ಡಬ್ಲ್ಯು : 4 ಸಿ.ಡಬ್ಲ್ಯು : 4

ಸಾಕ್ಷಿದಾರನ ಹೆಸರು : ಸುದರ್ಶನ್

ತಂದೆಯ ಹೆಸರು : ಶಂಕರ್‌ನಾಯ್ಕ

ಪ್ರಾಯ : 28 ವರ್ಷ

ಉದ್ಯೋಗ : ಚಾಲಕ

ವಾಸ : ಸೋಮೇಶ್ವರ

ದಿನಾಂಕ 25.07.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-

ಚಾಸಾ-2 ರವರ ಪರಿಚಯ ಇರುವುದಿಲ್ಲ. ಪೊಲೀಸರು ನನಗೆ ನೋಟಿಸು ನೀಡಿ ಮಹಜರು ಮಾಡಲು ಸಹಕರಿಸುವಂತೆ ಹೇಳಿರುತ್ತಾರೆ. ಸದರಿ ಸಮಯದಲ್ಲಿ ಯಾರಿದ್ದರು ಎಂದು ನನಗೆ ಗೊತ್ತಿಲ್ಲ. ಪೊಲೀಸರು 18.06.2023 ರಂದು ಹೆಬ್ರಿಗೆ ಬರಲು ಹೇಳಿ ಅಲ್ಲಿಂದ ಜಕ್ಕನಮಕ್ಕಿಗೆ ಬರಲು ಹೇಳಿರುತ್ತಾರೆ. ಪೊಲೀಸರು ಅಲ್ಲಿ ಬರವಣಿಗೆ ಮಾಡಿರುವುದಿಲ್ಲ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಸಾಕ್ಷಿಯು ಮಹಜರು ಹಾಗೂ ನಕಾಶೆಯಲ್ಲಿರು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಮಹಜರನ್ನು ಈಗಾಗಲೇ ನಿಪಿ-10 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-10(ಬಿ) ಎಂದು, ನಕಾಶೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ನಕಾಶೆಯನ್ನು ಈಗಾಗಲೇ ನಿಪಿ-11 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ-11(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಮಹಜರು ಸಮಯ ತೆಗೆದ ಫೋಟೋವನ್ನು ನೋಡಿ ಗುರುತಿಸಿರುತ್ತಾರೆ ಸದ್ರಿ ಫೋಟೊವನ್ನು ನಿಪಿ-12 ಎಂದು ಗುರುತಿಸಲಾಗಿದೆ.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

ಪಾಟೀ ಸವಾಲು ಃ ಸಹಾಯಕ ಸರ್ಕಾರಿ ಅಭಿಯೋಜಕರುಃ-

ದಿಃ18.06.2020 ರಂದು ಪೊಲೀಸರು ನಮ್ಮನ್ನು ಘಟನಾ ಸ್ಥ,ಳಕ್ಕೆ ಬರ ಹೇಳಿದ್ದು ಚಾಸಾ-5 ರವರ ಸಮಕ್ಷಮ ಚಾಸಾ-2 ರವರು ತಕ್ಷೀರು ಸ್ಥಳವನ್ನು ತೋರಿಸಿಕೊಟ್ಟಂತೆ ನಿಪಿ-10 ರಂತೆ ಮಹಜರು ಮಾಡಿ ನಿಪಿ-11 ರಂತೆ ನಕಾಶೆಯನ್ನು ತಯಾರಿಸಿ ಸ್ಥಳದಲ್ಲಿಯೇ ನನ್ನ ಮತ್ತು ಚಾಸಾ-5 ರವರ ಹಾಗೂ ಚಾಸಾ-2 ರವರ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಸಹಿಯನ್ನು ಮಾತ್ರ ಪಡೆದುಕೊಂಡಿರುತ್ತಾರೆ ಬರವಣಿಗೆಯನ್ನು ಮಾಡಿರುವುದಿಲ್ಲ ಎಂದುನುಡಿಯುತ್ತಾರೆ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಃ ಆರೋಪಿ ಪರ ಃ ಶ್ರೀಮತಿ ಎಸ್ ಎನ್ ಕೆ ವಕೀಲರಿಂದ ಃ

ನಾನು ಘಟನಾ ಸ್ಥಳಕ್ಕೆ ಹೋಗುವ ಪೂರ್ವದಲ್ಲಿ ಪೊಲೀಸರು ಬರವಣಿಗೆ ಮಾಡಿದ್ದರು ಎಂದರೆ ಸರಿ. ಘಟನಾ ಸ್ಥಳದಲ್ಲಿ ಪೊಲೀಸರು ಸಹಿ ಹಾಕಲು ಹೇಳಿದ್ದರಿಂದ ಸಹಿ ಹಾಕಿರುತ್ತೇನೆ. ನಿಪಿ-10 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ.

ಮರುವಿಚಾರಣೆ: ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕಾರ್ಕಳ